# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 1202 |
| ಮಾನ್ಯ ಸದಸ್ಯರ ಹೆಸರು : | : ಶ್ರೀ ಛಲವಾದಿ ಟಿ.ನಾರಾಯಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ: | : 15.12.2023 |
| ಉತ್ತರಿಸುವವರು | : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ದೇವದಾಸಿ ಪದ್ಧತಿಯು ಪ್ರಸ್ತುತ ದಿನಗಳಲ್ಲಿ ಚಾಲ್ತಿಯಲ್ಲಿದೆಯೇ; ದೇವದಾಸಿ ಅಂತಹ ಅನಿಷ್ಟ ಪದ್ಧತಿಗಳನ್ನು ನಿರ್ಮೂಲನೆ ಮಾಡುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು) | ಚಾಲ್ತಿಯಲ್ಲಿಲ್ಲ.<br>ದೇವದಾಸಿ ಪದ್ಧತಿ ನಿರ್ಮೂಲನೆಗಾಗಿ ಕರ್ನಾಟಕ ಸರ್ಕಾರವು ದೇವದಾಸಿಯರ (ಸಮರ್ಪಣ ನಿಷೇಧ) ಅಧಿನಿಯಮ 1982 ಮತ್ತು ನಿಯಮಗಳು [1988] ಜಾರಿಯಲ್ಲಿದ್ದು, ಅಧಿನಿಯಮವನ್ನು 2009ರಲ್ಲಿ ತಿದ್ದುಪಡಿ ಮಾಡಲಾಗಿದೆ. (ಅಧಿಸೂಚನೆ No:SAMVYAASHAE 8 SHASANA 2008 ದಿನಾಂಕ: 1-6-2010) ಕರ್ನಾಟಕ ದೇವದಾಸಿಯರ (ಸಮರ್ಪಣ ನಿಷೇಧ) (ತಿದ್ದುಪಡಿ) ಅಧಿನಿಯಮ 2009 (2010ರ ಕರ್ನಾಟಕ ಅಧಿನಿಯಮ ಸಂಖ್ಯೆ:1) ರಂತೆ ದೇವದಾಸಿ ಪದ್ಧತಿಯನ್ನು ನಿರ್ಮೂಲನೆಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br>ರಾಜ್ಯದ 14 ಜಿಲ್ಲೆಗಳಲ್ಲಿ ಚಾಲ್ತಿಯಲ್ಲಿದ್ದ ದೇವದಾಸಿ ಪದ್ಧತಿಯನ್ನು ನಿರ್ಮೂಲನೆ ಗೊಳಿಸಲು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ಕೈಗೊಂಡಿರುವ ಕಾರ್ಯಕ್ರಮಗಳು ಈ ಕೆಳಕಂಡಂತಿದೆ.<br>01) **ಜಾತ್ರಾ ಜಾಗೃತಿ ಕಾರ್ಯಕ್ರಮ** : ದೇವದಾಸಿ ಪದ್ಧತಿಯನ್ನು ತಡೆಗಟ್ಟಲು ಹಾಗೂ ಜಾಗೃತಿ ಮೂಡಿಸಲು ವಿಚಾರ ಸಂಕಿರಣ, ಕರಪತ್ರ, ಕೈಪಿಡಿ ಹಾಗೂ ಧ್ವನಿವರ್ಧಕ ಮೂಲಕ ಪ್ರಚಾರ ಮಾಡಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು.<br>02) **ಬೀದಿನಾಟಕ:** ಜಾತ್ರಾ ಸಮಯದಲ್ಲಿ ಈ ಪದ್ಧತಿಯ ದುಷ್ಟ ಪರಿಣಾಮಗಳ ಬಗ್ಗೆ ಸ್ಥಳೀಯ ಕಲಾವಿದರನ್ನು ಬಳಸಿಕೊಂಡು ಬೀದಿ ನಾಟಕಗಳನ್ನು ಏರ್ಪಡಿಸುವುದು. |

| | | |
|---|---|---|
| | | 03) **ಕಾನೂನು ಶಿಬಿರ**: ಪದ್ಧತಿಯ ದುಷ್ಪರಿಣಾಮಗಳ ಬಗ್ಗೆ ಹಾಗೂ ಈ ಪದ್ಧತಿಯನ್ನು ಆಚರಣೆಗೆ ತಂದಲ್ಲಿ ಅದಕ್ಕೆ ವಿಧಿಸಬಹುದಾದ ಶಿಕ್ಷೆಗಳ ಹಾಗೂ ಇನ್ನಿತರ ನಿಯಮಗಳ ಬಗ್ಗೆ ಅನುಭವಿ ನ್ಯಾಯಾಧೀಶರು ಹಾಗೂ ವಕೀಲರ ಮೂಲಕ ದೇವದಾಸಿ (ಸಮರ್ಪಣ ನಿಷೇಧ) ಅಧಿನಿಯಮದಡಿ ಅಳವಡಿಸಿರುವ ನಿಯಮಗಳು ಕಾನೂನಿನಡಿ ವಿಧಿಸಲಾಗುವ ಶಿಕ್ಷೆ ಇವುಗಳ ಬಗ್ಗೆ ಅರಿವು ಮೂಡಿಸಲು ಕಾನೂನು ಶಿಬಿರಗಳನ್ನು ಹಮ್ಮಿಕೊಳ್ಳುವುದು.<br>04) **ಆರೋಗ್ಯ ಶಿಬಿರ**: ಮಾಜಿ ದೇವದಾಸಿ ಮಹಿಳೆಯರಿಗೆ ಸಂಬಂಧಿಸಿದ ಲೈಂಗಿಕ ರೋಗಗಳ ತಪಾಸಣೆ ಬ್ರೆಸ್ಟ್ ಮತ್ತು ಸರ್ವೀಕಲ್ ಕ್ಯಾನ್ಸರ್, ಕಣ್ಣಿನ ತಪಾಸಣೆ, ಟಿ.ಬಿ, ಮುಂತಾದ ರೋಗಗಳನ್ನು ಪತ್ತೆ ಹಚ್ಚಲು ವಿಶೇಷ ಶಿಬಿರಗಳನ್ನು ಏರ್ಪಡಿಸುವುದು ಇದಕ್ಕಾಗಿ ಜಿಲ್ಲೆಯಲ್ಲಿ ಇರುವ ವೈದ್ಯಕೀಯ ಶಿಕ್ಷಣ ಸಂಸ್ಥೆಗಳನ್ನು ಸಂಪರ್ಕಿಸಿ ಆಯಾ ಜಿಲ್ಲೆಯ ತಾಲೂಕಿನಲ್ಲಿ ಎರಡು ಶಿಬಿರಗಳನ್ನು ಕಡ್ಡಾಯವಾಗಿ ಏರ್ಪಡಿಸುವುದು.<br>05) **ಗೋಡೆ ಬರಹ**: ಈ ಪದ್ಧತಿ ಅನುಕರಣೆ ಮಾಡದಿರುವಂತೆ ಹಾಗೂ ಅನುಕರಣೆ ಮಾಡಿದಲ್ಲಿ ಅವರುಗಳಿಗೆ ಒಳಪಡಿಸುವ ಶಿಕ್ಷೆ ಹಾಗೂ ದಂಡಗಳ ಬಗ್ಗೆ ಸೂಕ್ಷ್ಮ ಪ್ರದೇಶಗಳಲ್ಲಿ ಯೋಜನೆಗಳ ಅತಿ ಮುಖ್ಯವಾದ ಅಂಶಗಳನ್ನು ಗೋಡೆ ಬರಹಗಳ ಮೂಲಕ ಪ್ರಕಟಿಸುವುದು.<br>06) **ಐ.ಇ.ಸಿ:** ಯೋಜನೆಯ ಕಾರ್ಯಕ್ರಮಗಳ ಅನುಷ್ಠಾನದ (ಜಾತ್ರಾ ಜಾಗೃತಿ ಕಾರ್ಯಕ್ರಮ, ಕಾನೂನು ಶಿಬಿರ, ಆರೋಗ್ಯ ಶಿಬಿರ ಮತ್ತು ಬೀದಿ ನಾಟಕ) ಬಗ್ಗೆ, ಕರಪತ್ರಗಳು, ಬ್ಯಾನರ್ ಗಳು, ಪೋಸ್ಟರ್‌ಗಳು, ಧ್ವನಿವರ್ಧಕ ವಾಹನಗಳು ಮತ್ತು ಇತ್ಯಾದಿಗಳ ಮುಖಾಂತರ ಪ್ರಚಾರ ಪಡಿಸುವುದು. |
| **(ಆ)** | ದೇವದಾಸಿ ಮಹಿಳೆಯರಿಗೆ ಸರ್ಕಾರದಿಂದ ರೂಪಿಸಿರುವ ಯೋಜನೆಗಳಾವುವು; ದೇವದಾಸಿಯರಿಗೆ ಪುನರ್ವಸತಿ ಕಾರ್ಯಕ್ರಮಗಳನ್ನು ಅನುಷ್ಠಾನ ಗೊಳಿಸುವಲ್ಲಿ ಸರ್ಕಾರವು ತೆಗೆದುಕೊಂಡ ಕ್ರಮಗಳೇನು: (ಸಂಪೂರ್ಣ ಮಾಹಿತಿ ನೀಡುವುದು) | ದೇವದಾಸಿ ಮಹಿಳೆಯರಿಗೆ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ಯೋಜನೆಗಳು ಈ ಕೆಳಕಂಡಂತಿದೆ.<br>01) **ಮಾಸಾಶನ ಯೋಜನೆ**: 45 ವರ್ಷ ಮೇಲ್ಪಟ್ಟ ಮಾಜಿ ದೇವದಾಸಿ ಮಹಿಳೆಯರಿಗೆ ಪ್ರತಿ ಮಾಹೆ ರೂ.1500/- ಗಳಂತೆ ಮಾಶಾಸನ ನೀಡಲಾಗುತ್ತಿದೆ. |

| | | |
|---|---|---|
| | | 02) **ಆರ್ಥಿಕ ಸಹಾಯ**: ಆದಾಯೋತ್ಪನ್ನಕರ ಚಟುವಟಿಕೆ ಕೈಗೊಳ್ಳಲು ಈ ಯೋಜನೆಯಲ್ಲಿ ಪ್ರತಿ ಫಲಾನುಭವಿಗೆ ತಲಾ ರೂ.30,000/-ಗಳಂತೆ ಸಹಾಯಧನವನ್ನು ನೀಡಲಾಗುತ್ತಿದೆ.<br><br>03) **ಮಾಜಿ ದೇವದಾಸಿ ವಸತಿ ಯೋಜನೆ** : ಸಮೀಕ್ಷೆಯಲ್ಲಿ ಗುರುತಿಸಲ್ಪಟ್ಟ, ಮಾಜಿ ದೇವದಾಸಿ ಮಹಿಳೆಯರಿಗೆ ಈ ಯೋಜನೆಯಡಿ ನಿವೇಶನ ಹೊಂದಿರುವ ಮಾಜಿ ದೇವದಾಸಿ ಮಹಿಳೆಯರಿಗೆ ಗ್ರಾಮೀಣ ಪ್ರದೇಶಕ್ಕೆ ಘಟಕ ವೆಚ್ಚ ರೂ.1.75 ಲಕ್ಷ ಹಾಗೂ ನಗರ ಪ್ರದೇಶಕ್ಕೆ ಘಟಕ ವೆಚ್ಚ ರೂ.2.00 ಲಕ್ಷಗಳನ್ನು ರಾಜೀವ್ ಗಾಂಧಿ ವಸತಿ ನಿಗಮದ ಮೂಲಕ ವಸತಿ ಸೌಲಭ್ಯವನ್ನು ಕಲ್ಪಿಸಿಕೊಡಲಾಗುತ್ತದೆ.<br><br>2023-24ನೇ ಸಾಲಿನ ಆಯವ್ಯಯದಲ್ಲಿ ಯಾವುದೇ ಅನುದಾನವನ್ನು ಈ ಯೋಜನೆಗೆ ಒದಗಿಸಿರುವುದಿಲ್ಲ. |
| **(ಇ)** | ಸಮಾಜಕ್ಕೆ ಹೆದರಿ ಹಾಗೂ ಅನ್ಯಕಾರಣಗಳಿಂದ ದೇವದಾಸಿಯರೆಂದು ದಾಖಲಾತಿ ಮಾಡಿಕೊಳ್ಳದಿರುವ ಹಲವು ಪ್ರಕರಣಗಳು ಇದ್ದು, ಅಂತವರಿಗಾಗಿ ಸರ್ಕಾರವು ರೂಪಿಸಿರುವ ಕಾರ್ಯಕ್ರಮಗಳೇನು; ಅಂತವರಲ್ಲಿ ಹಲವು ಜನರಿಗೆ ವಯಸ್ಸಾಗಿರುವುದರಿಂದ ಹಾಗೂ ಕಡುಬಡವರಾಗಿರುವುದರಿಂದ ಜೀವನ ಸಾಗಿಸುವುದು ಕಷ್ಟಕರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು? | ದೇವದಾಸಿ ಮಹಿಳೆಯರನ್ನು ಸಮಾಜದ ಮುಖ್ಯ ವಾಹಿನಿಗೆ ತರಲು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮವು 1993-94 ಮತ್ತು 2007-08 ಸಾಲಿನಲ್ಲಿ 14 ಜಿಲ್ಲೆಗಳಲ್ಲಿ ಸಮೀಕ್ಷೆ ನಡೆಸಿ 46,660 ಮಹಿಳೆಯರನ್ನು ಗುರುತಿಸಲಾಗಿದೆ. ಸದರಿ ಮಹಿಳೆಯರಿಗೆ ಆರ್ಥಿಕ ನೆರವು ಪಿಂಚಣಿ ಹಾಗೂ ವಸತಿ ಯೋಜನೆಯ ಮೂಲಕ ಸೌಲಭ್ಯ ಒದಗಿಸಲಾಗುತ್ತಿದೆ. ಪ್ರಸ್ತುತ ದೇವದಾಸಿ ಮಹಿಳೆಯರ ಮರುಸಮೀಕ್ಷೆ ನಡೆಸಿ ಸಮೀಕ್ಷೆಯಿಂದ ಹೊರಗುಳಿದ ಮಹಿಳೆಯರಿಗೂ ಸೌಲಭ್ಯ ಒದಗಿಸುವ ಕುರಿತು ಕ್ರಮ ಕೈಗೊಳ್ಳಲಾಗುತ್ತಿದೆ. |

ಸಂಖ್ಯೆ: ಮಮಇ 93 ಮಅನಿ 2023

(signature)

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ,
ವಿಕಲಚೇತನರ ಹಾಗೂ ಹಿರಿಯ ನಾಗರೀಕರ
ಸಬಲೀಕರಣ ಸಚಿವರು.